ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 26/07/2019

# ಮಾಸಾಂತ್ಯದೊಳಗೆ ವಿತ್ತ ಮಸೂದೆ ಪಾಸಾಗದಿದ್ರೆ ಸಾಂವಿಧಾನಿಕ ಬಿಕ್ಕಟ್ಟು

## ವೇತನ ಕೊಡಲೂ ಆಗಲ್ಲ: ಸ್ಪೀಕರ್

ಬೆಂಗಳೂರು: ಮಾಸಾಂತ್ಯದೊಳಗೆ ಹೊಸ ಸರ್ಕಾರ ರಚನೆಯಾಗಿ ಧನವಿನಿಯೋಗ ಮಸೂದೆ ಅಂಗೀಕಾರಕ್ಕೆ ಸಹಕಾರ ಕೋರಿದರೆ ಅಗತ್ಯ ಸಹಕಾರ ನೀಡಲು ಸಿದ್ಧನಿದ್ದೇನೆ ಸಭಾಧ್ಯಕ್ಷ ಕೆ.ಆರ್. ರಮೇಶ್‌ಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಸುದ್ದಿಗೋಷ್ಠಿಯಲ್ಲಿ



ಮಾತನಾಡಿದ ಅವರು, ಈ ತಿಂಗಳ ಅಂತ್ಯದೊಳಗೆ ಸರ್ಕಾರ ರಚನೆಯಾಗಿ ಧನವಿನಿಯೋಗ ಮಸೂದೆ ಅಂಗೀಕಾರವಾಗದಿದ್ದರೆ ಸಾಂವಿಧಾನಿಕ ಬಿಕ್ಕಟ್ಟು ಎದುರಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಸರ್ಕಾರಿ ನೌಕರರಿಗೆ ವೇತನ ಸೇರಿದಂತೆ ರಾಜ್ಯದ ಆರ್ಥಿಕ ಪರಿಸ್ಥಿತಿಗೆ ತೀವ್ರ ಸಮಸ್ಯೆ ಎದುರಾಗಲಿದೆ. ಸದನವನ್ನು ಅಮಾನತಿನಲ್ಲಿಟ್ಟು ರಾಷ್ಟ್ರಪತಿ ಆಡಳಿತ ಜಾರಿಗೊಳಿಸುವ ಕುರಿತು ನನಗೆ ಗೊತ್ತಿಲ್ಲ. ಆದರೆ, ಒಂದು ವೇಳೆ ಅಂತಹ ಪರಿಸ್ಥಿತಿ ನಿರ್ಮಾಣವಾದರೆ, ಕೇಂದ್ರಕ್ಕೆ ಕಳುಹಿಸಿಕೊಟ್ಟು ಅಲ್ಲಿಂದ ಒಪ್ಪಿಗೆ ಪಡೆದು ರಾಜ್ಯಪಾಲರ ಮೂಲಕ ಮಸೂದೆಯನ್ನು ಅಂಗೀಕರಿಸಬೇಕಾಗುತ್ತದೆ ಎಂದರು. ಇದಕ್ಕೂ ಮುನ್ನ ತಮ್ಮ ನಿವಾಸದ ಬಳಿ ಮಾತನಾಡಿದ ಅವರು, ಜು.31ರೊಳಗೆ ಧನವಿನಿಯೋಗ ಮಸೂದೆ ವಿಧಾನಮಂಡಲದ ಉಭಯ ಸದನಗಳಲ್ಲೂ ಅಂಗೀಕಾರ ಆಗಬೇಕು. ಅದಕ್ಕೂ ಮುನ್ನ ಹೊಸ ಸರ್ಕಾರ ರಚನೆಯಾಗಬೇಕು. ಇದು ಆಗದಿದ್ದರೆ ಸಹಜವಾಗಿಯೇ ಸರ್ಕಾರ ಸ್ಥಗಿತಗೊಳ್ಳುತ್ತದೆ. ನಂತರ ಖಜಾನೆಯಿಂದ ಒಂದು ರೂಪಾಯಿಯನ್ನೂ ಡ್ರಾ ಮಾಡಲು ಆಗುವುದಿಲ್ಲ, ಸರ್ಕಾರಿ ನೌಕರರಿಗೆ ಸಂಬಳ ನೀಡಲೂ ಹಣ ಇಲ್ಲದಂತಾಗುತ್ತದೆ. ಇದರಿಂದ ಸಾಂವಿಧಾನಿಕ ಬಿಕ್ಕಟ್ಟು ಸೃಷ್ಟಿಯಾಗುವ ಸಂಭವವಿದೆ. ಹಾಗೇನಾದರೂ ಆದರೆ, ರಾಜ್ಯದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಇಂತಹ ಬಿಕ್ಕಟ್ಟು ಎದುರಾದಂತಾಗಲಿದೆ ಎಂದು ಹೇಳಿದರು.